# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರದ ಎಲ್ಲಾ ಇಲಾಖೆಗಳ ಸಿವಿಲ್ ಕಾಮಗಾರಿಗಳ ಹಲವಾರು ಅಂದಾಜುಗಳು ಅಧಿಕ ಹೆಚ್ಚುವರಿಗಳಿಂದ ಪರಿಷ್ಕೃತಗೊಳ್ಳುತ್ತಿರುವುದನ್ನು ತಡೆಗಟ್ಟಲು/ನಿಯಂತ್ರಿಸಲು ಕಾಮಗಾರಿ ಅಂದಾಜುಗಳ ತಯಾರಿಕಾ ಅಧ್ಯಯನ ಸಮಿತಿ ರಚಿಸುವ ಬಗ್ಗೆ.

ಪ್ರಸ್ತಾವನೆ:

ಸರ್ಕಾರದ ವಿವಿಧ ಇಲಾಖೆಗಳಡಿ ಕೈಗೊಳ್ಳುತ್ತಿರುವ ಕಾಮಗಾರಿಗಳಲ್ಲಿ ಹಲವಾರು ಕಾಮಗಾರಿಗಳ ಅನುಷ್ಠಾನದಲ್ಲಿ ಇವುಗಳ ಯೋಜನೆ ಮತ್ತು ವಿನ್ಯಾಸ ತಯಾರಿಸುವಲ್ಲಿನ ನ್ಯೂನ್ಯತೆಗಳು, ಅವೈಜ್ಞಾನಿಕ ವಿಸ್ತೃತ ಯೋಜನಾ ವರದಿ ತಯಾರಿಕೆ, ಅಗತ್ಯವಿರುವ ಎಲ್ಲಾ ಐಟಂಗಳನ್ನೊಳಗೊಂಡ ಸಮಗ್ರವಾದ ಅಂದಾಜು ತಯಾರಿಸದೇ ಇರುವುದು, ಭೂಸ್ವಾಧೀನ ಪ್ರಕ್ರಿಯೆ, ಪರಿಸರ ಸಂಬಂಧಿತ ತೀರುವಳಿ ಮುಂತಾದ ಅಗತ್ಯವಿರುವ ಶಾಸನಬದ್ಧ ತೀರುವಳಿ ಸಕಾಲದಲ್ಲಿ ಪಡೆಯದೇ ಕಾಮಗಾರಿಗಳನ್ನು ಆರಂಭಿಸುವುದು, ಗುತ್ತಿಗೆ ಒಪ್ಪಂದದಲ್ಲಿ ನಿಖರವಾದ ನಿಬಂಧನೆ/ಷರತ್ತುಗಳ ವಿಧಿಸುವ ಕೊರತೆಯಿಂದ ಉಂಟಾಗುವ ಆರ್ಬಿಟ್ರೇಷನ್/ನ್ಯಾಯಾಲಯಗಳ ದಾವೆಗಳಿಂದ ಉಂಟಾಗುವ ವಿಳಂಬ ಹಾಗೂ ಇತರೆ ಕಾರಣಾಂತರಗಳಿಂದ ಕಾಮಗಾರಿಗಳ ಮೂಲ ಅಂದಾಜು ಮೊತ್ತವು ಪರಿಷ್ಕೃತಗೊಂಡು ಸರ್ಕಾರಕ್ಕೆ ಆರ್ಥಿಕ ಹೊರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಮುಂದುವರೆದು ಕಾಮಗಾರಿಗಳನ್ನು ಪೂರ್ಣಗೊಳಿಸುವಲ್ಲಿ ವಿಳಂಬವಾಗುತ್ತಿರುವುದರಿಂದ ಈ ಕಾಮಗಾರಿಗಳ ಸೌಲಭ್ಯಗಳು ಸಾರ್ವಜನಿಕರಿಗೆ ಸಕಾಲದಲ್ಲಿ ತಲುಪುವಲ್ಲಿ ವಿಳಂಬವಾಗುತ್ತಿರುವುದನ್ನೂ ಸಹ ಸರ್ಕಾರವು ಗಮನಿಸಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಮೂಲ ಅಂದಾಜುಗಳು ಪರಿಷ್ಕರಣೆಗೊಳ್ಳುವ ಮೂಲಕ ಸರ್ಕಾರಕ್ಕೆ ಆರ್ಥಿಕ ಹೊರೆಯಾಗುತ್ತಿರುವುದನ್ನು ತಡೆಗಟ್ಟಲು ಹಾಗೂ ಸರ್ಕಾರದ ಕಾಮಗಾರಿಗಳ ಸೌಲಭ್ಯಗಳು ಸಾರ್ವಜನಿಕರಿಗೆ ಸಕಾಲದಲ್ಲಿ ಪೂರೈಸುವ ಉದ್ದೇಶದಿಂದ ಕಾಮಗಾರಿಗಳ ಅಂದಾಜುಗಳು ಪರಿಷ್ಕರಣೆಯಾಗಲು ಕಾರಣವಾಗುವ ಎಲ್ಲಾ ಅಂಶಗಳ ಬಗ್ಗೆ ವೈಜ್ಞಾನಿಕವಾಗಿ ಅಧ್ಯಯನ ಮಾಡಿ ನ್ಯೂನ್ಯತೆಗಳನ್ನು ಗುರುತಿಸಿ ಸೂಕ್ತ ಸಲಹೆ/ಸೂಚನೆಗಳುಳ್ಳ ವರದಿಯನ್ನು ನೀಡಲು ಪರಿಣಿತರನ್ನೊಳಗೊಂಡ ಸಮಿತಿಯನ್ನು ರಚಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 292 ಆಕೋ-2/2023, ಬೆಂಗಳೂರು, ದಿನಾಂಕ:20.10.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದಿಂದ ಕೈಗೆತ್ತಿಕೊಳ್ಳುವ ಕಾಮಗಾರಿಗಳ ಅಂದಾಜುಗಳು ಪರಿಷ್ಕೃತಗೊಳ್ಳುತ್ತಿರುವುದರ ಬಗ್ಗೆ...

ಸಮಗ್ರವಾಗಿ ಪರಾಮರ್ಶಿಸಿ ಹಾಗೂ ಅಧ್ಯಯನ ನಡೆಸಿ ಕಾಮಗಾರಿಗಳ ಅಂದಾಜುಗಳು ಅನಗತ್ಯವಾಗಿ ಪರಿಷ್ಕೃತಗೊಳ್ಳುವುದನ್ನು ತಡೆಗಟ್ಟಲು/ನಿಯಂತ್ರಿಸಲು ಸೂಕ್ತ ಸಲಹೆ/ಸೂಚನೆಗಳನ್ನು ಒಳಗೊಂಡ ವರದಿಯನ್ನು ಒಂದು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸಲು ಈ ಕೆಳಕಂಡ ಪರಿಣಿತರನ್ನೊಳಗೊಂಡ **"ಕಾಮಗಾರಿ ಅಂದಾಜುಗಳ ತಯಾರಿಕಾ ಅಧ್ಯಯನ ಸಮಿತಿ"**ಯನ್ನು ರಚಿಸಿ ಆದೇಶಿಸಿದೆ.

| ಕ್ರ. ಸಂ. | ಹೆಸರು/ಪದನಾಮ | ಹುದ್ದೆ |
|---|---|---|
| 1 | ಶ್ರೀ ಬಿ. ಗುರುಪ್ರಸಾದ್<br>ಸರ್ಕಾರದ ಕಾರ್ಯದರ್ಶಿ,<br>ಲೋಕೋಪಯೋಗಿ ಇಲಾಖೆ ಹಾಗೂ<br>ಪ್ರಧಾನ ಅಭಿಯಂತರರು (ನಿವೃತ್ತ) | ಅಧ್ಯಕ್ಷರು |
| 2 | ಶ್ರೀ ಕೆ.ಎಸ್. ಹರೀಶ್<br>ಸರ್ಕಾರದ ಅಧೀನ ಕಾರ್ಯದರ್ಶಿ<br>(ನಬಾರ್ಡ್), ಲೋಕೋಪಯೋಗಿ<br>ಇಲಾಖೆ, ವಿಕಾಸ ಸೌಧ | ಸದಸ್ಯರು |
| 3 | ಶ್ರೀಮತಿ ಎಂ.ಎಸ್. ಪದ್ಮಿನಿ<br>ಜಂಟಿ ನಿಯಂತ್ರಕರು<br>ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ,<br>ಕೆ.ಆರ್. ವೃತ್ತ., ಬೆಂಗಳೂರು | ಸದಸ್ಯರು |

ಮೇಲ್ಕಂಡ ಸಮಿತಿಯು ಕಾಮಗಾರಿಗಳ ಪರಿಷ್ಕೃತ ಅಂದಾಜುಗಳಿಗೆ ಸಂಬಂಧಿಸಿದಂತೆ ಅಧಿನಿಯಮ, ನಿಯಮಗಳು, ಸುತ್ತೋಲೆಗಳು, ಸರ್ಕಾರಿ ಆದೇಶಗಳು,ಇಲಾಖಾ ಸಂಹಿತೆಗಳನ್ನೂ ಸಹ ಪರಾಮರ್ಶಿಸಿ ಈ ಕೆಳಕಂಡ ಅಂಶಗಳ ಕುರಿತು ಅಧ್ಯಯನ ನಡೆಸಿ ಅಗತ್ಯವಿರುವ ಸಲಹೆ/ಸೂಚನೆಗಳನ್ನೊಳಗೊಂಡ ವರದಿಯನ್ನು ಒಂದು ತಿಂಗಳೊಳಗಾಗಿ ನೀಡಲು ಆದೇಶಿಸಿದೆ.

1. ಕಾಮಗಾರಿಗಳ ಯೋಜನೆ ಮತ್ತು ವಿನ್ಯಾಸ ತಯಾರಿಕೆಯಲ್ಲಿ ಸುಧಾರಣೆ ಕುರಿತು.
2. ಕಾಮಗಾರಿಗಳ ಸ್ವರೂಪ, ಭೂ ಒಡೆತನ ಹಾಗೂ ಕಾಮಗಾರಿಗೆ ಅಗತ್ಯವಿರುವ ಭೂಮಿಯ ಪರಿಮಾಣ ಆಧರಿಸಿ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಕಾಲಮಿತಿ ನಿಗದಿಪಡಿಸುವ ಕುರಿತು.
3. ರೂ.10.00 ಕೋಟಿವರೆಗಿನ ಅಂದಾಜು ಮೊತ್ತದ ಕಾಮಗಾರಿಗಳ ಯೋಜನೆ ಮತ್ತು ವಿನ್ಯಾಸವನ್ನು ಪರಿಣಾಮಕಾರಿಯಾಗಿ ರೂಪಿಸಿ ಸಕಾಲದಲ್ಲಿ ಪೂರ್ಣಗೊಳಿಸಲು......

ಸಾಧ್ಯವಿರುವುದರಿಂದ ಇವುಗಳ ಅನುಮೋದಿತ ಅಂದಾಜುಗಳು, ಮೂಲ ಅಂದಾಜು ಮೊತ್ತವನ್ನು ಮೀರಿ ಪರಿಷ್ಕೃತಗೊಳ್ಳುವುದನ್ನು ನಿರ್ಬಂಧಗೊಳಿಸುವ ಕುರಿತು.

4. ಗುತ್ತಿಗೆದಾರರು ಆರ್ಬಿಟ್ರೇಷನ್/ನ್ಯಾಯಾಲಯಗಳಲ್ಲಿ ದಾವೆ ಹೂಡವುದನ್ನು ತಡೆಯುವ ನಿಟ್ಟಿನಲ್ಲಿ ಗುತ್ತಿಗೆ ಕರಾರುಗಳಲ್ಲಿ ಸೂಕ್ತ ರೀತಿಯ ಷರತ್ತು/ನಿಬಂಧನೆಗಳ ಅಳವಡಿಕೆ ಹಾಗೂ ಇವುಗಳನ್ನು ಜಾರಿಗೊಳಿಸುವಲ್ಲಿ ಇಲಾಖೆಗಳಿಗೆ ಹೊಣೆಗಾರಿಕೆ ನಿಗದಿಪಡಿಸುವ ಕುರಿತು.
5. ಪರಿಷ್ಕೃತ ಅಂದಾಜನ್ನು ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಯನ್ನು ಪಡೆಯುವ ಕುರಿತಂತೆ ಕಾಲಮಿತಿ ನಿಗದಿಪಡಿಸುವ ಕುರಿತು
6. ಮೂಲ ಅಂದಾಜು ಪರಿಷ್ಕೃತಗೊಳ್ಳುವುದನ್ನು ಮುಂಚಿತವಾಗಿಯೇ ಊಹಿಸಿ ಕಾಮಗಾರಿಗಳ ಭೌತಿಕ ಪ್ರಗತಿ ಮತ್ತು ಆರ್ಥಿಕ ಪ್ರಗತಿಗಳ ಆಧಾರದ ಮೇಲೆ ಯಾವ ಹಂತದಲ್ಲಿ ಅಂದಾಜು ಪರಿಷ್ಕರಣೆಯ ಪ್ರಕ್ರಿಯೆಯನ್ನು ಆರಂಭಿಸಬೇಕೆಂಬುದರ ಬಗ್ಗೆ.
7. ಪರಿಷ್ಕೃತ ಅಂದಾಜು ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಗೊಳ್ಳದೇ ಅನುಮೋದಿತ ಮೊತ್ತವನ್ನು ಮೀರಿ ಭರಿಸುವ ವೆಚ್ಚವನ್ನು ನಿರ್ಬಂಧಗೊಳಿಸುವ ಕುರಿತು.
8. ಪರಿಷ್ಕೃತ ಅಂದಾಜನ್ನು ಮರುಪರಿಷ್ಕೃತಗೊಳಿಸುವುದನ್ನು ನಿರ್ಬಂಧಿಸುವ ಬಗ್ಗೆ.
9. ಪ್ರಚಲಿತ ಅನುಸೂಚಿ ದರಗಳಿಗೆ ಅನುಗುಣವಾಗಿ ಅಂದಾಜುಗಳನ್ನು ತಯಾರಿಸಿ ಆಡಳಿತಾತ್ಮಕ ಅನುಮೋದನೆಯೊಂದಿಗೆ ಟೆಂಡರ್ ಕರೆಯುವ ಬಗ್ಗೆ.
10. ಆಡಳಿತಾತ್ಮಕ ಅನುಮೋದನೆ ಪಡೆದ ನಂತರ ಕಾಲ ವಿಳಂಬ ಮಾಡದೇ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲು ಸಮಯ ನಿಗದಿಪಡಿಸುವುದು ಹಾಗೂ ಈ ರೀತಿ ಕ್ರಮವಹಿಸಲು ವಿಳಂಬವಾದಲ್ಲಿ ಪ್ರಚಲಿತ ದರಗಳ ಅನ್ವಯ ಅಂದಾಜು ತಯಾರಿಸಿ ಪುನಃ ಆಡಳಿತಾತ್ಮಕ ಅನುಮೋದನೆ ಪಡೆಯುವ ಕುರಿತು.
11. ಮೂಲ ಅಂದಾಜುಗಳನ್ನು ತಯಾರಿಸುವಾಗ ಸಣ್ಣ ಪುಟ್ಟ ಕಾಮಗಾರಿಗಳಾದ ಪೀಠೋಪಕರಣ ಅಳವಡಿಕೆ/LAN ಸಂಪರ್ಕ/ವಿದ್ಯುತ್ ಸಂಪರ್ಕ/ ದೀಪದ ಕಂಬಗಳ ಅಳವಡಿಕೆಯಂತಹ ಕಾಮಗಾರಿಗಳಿಗೆ ಅಂದಾಜು ಅನುವು ಮಾಡಿಕೊಳ್ಳದೇ ಪ್ರತ್ಯೇಕವಾಗಿ ಕೈಗೊಳ್ಳುವ ಬದಲಾಗಿ ಈ ಎಲ್ಲಾ ಅಂಶಗಳನ್ನು ಒಳಗೊಂಡಂತಹ ಸಮಗ್ರವಾದ ಅಂದಾಜು ತಯಾರಿಸುವ ಬಗ್ಗೆ.
12. ಕಾಮಗಾರಿಗಳ ಕರಾರುವಕ್ಕಾದ ಅಂದಾಜು ತಯಾರಿಕೆಗೆ ಅಗತ್ಯವಿರುವ ಮಣ್ಣಿನ ಗುಣ ಪರೀಕ್ಷೆ, ಹೂಳೆತ್ತುವಿಕೆ, ಸ್ಥಳ ಪರಿವೀಕ್ಷಣೆ, Utility Shifting, ಮತ್ತು ಇತರೆ ಅಗತ್ಯ ಪರೀಕ್ಷೆಗಳನ್ನು ಯಾವ ಹಂತದಲ್ಲಿ ಕೈಗೊಳ್ಳಬೇಕೆಂಬ ಬಗ್ಗೆ ಕಡ್ಡಾಯಗೊಳಿಸುವ ಕುರಿತು.
13. ಕಾಮಗಾರಿಗಳ ಸ್ವಭಾವಗಳು ಮತ್ತು ಸ್ವರೂಪಗಳನ್ನಾಧರಿಸಿ DBOT ಟೆಂಡರ್ ಪದ್ಧತಿಯ ಆಧಾರದ ಮೇಲೆ ಕೈಗೆತ್ತಿಕೊಳ್ಳಬಹುದಾದ ಕಾಮಗಾರಿಗಳನ್ನು ಗುರುತಿಸುವ ಕುರಿತು.

4/...

14. ಪರಿಷ್ಕೃತ ಅಂದಾಜಿಗೆ ಕಾರಣವಾಗುವ ಇನ್ನಿತರೆ ಎಲ್ಲಾ ಅಂಶಗಳ ಕುರಿತು ಪರಿಶೀಲಿಸುವುದು.

ಮೇಲ್ಕಂಡ ಸಮಿತಿಯು ವರದಿಯನ್ನು ತಯಾರಿಸುವ ಉದ್ದೇಶಕ್ಕಾಗಿ ಕೋರಿದ/ಅಪೇಕ್ಷಿಸಿದ ಅಗತ್ಯ ಮಾಹಿತಿ ಮತ್ತು ಸಹಕಾರವನ್ನು ಸರ್ಕಾರದ ಎಲ್ಲಾ ಇಲಾಖೆಗಳು ನೀಡಲು ಸೂಚಿಸಿದೆ.

ಸಮಿತಿಯು ದೈನಂದಿನ ಕಾರ್ಯನಿರ್ವಹಣೆಗಾಗಿ ಸೂಕ್ತ ಸ್ಥಳಾವಕಾಶವನ್ನು ಒದಗಿಸಲು ಲೋಕೋಪಯೋಗಿ ಇಲಾಖೆಯು ಕ್ರಮವಹಿಸುವುದು.

ಸಮಿತಿಯ ಅಧ್ಯಕ್ಷರಿಗೆ ರೂ.2.50 ಲಕ್ಷಗಳ ಗೌರವಧನವನ್ನು ನಿಗದಿಪಡಿಸಿ ಆದೇಶಿಸಿದೆ. ಸಮಿತಿಯ ಅಧ್ಯಕ್ಷರ ಗೌರವಧನವನ್ನು ಸೂಕ್ತ ಲೆಕ್ಕ ಶೀರ್ಷಿಕೆಯಡಿ ಲೋಕೋಪಯೋಗಿ ಇಲಾಖೆಯು ಪಾವತಿಸತಕ್ಕದ್ದು, ಸಮಿತಿಯ ಕಾರ್ಯ ನಿಮಿತ್ತ ಅಧ್ಯಕ್ಷರು ಕೈಗೊಳ್ಳುವ ಪ್ರಯಾಣಗಳಿಗೆ ನಿಯಮಾನುಸಾರ ಪ್ರಯಾಣ ಭತ್ಯೆ/ದಿನ ಭತ್ಯೆಗಳನ್ನು ಪಾವತಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ವೈ.ಬಿ.ಹೊನ್ನಲಿಂಗಪ್ಪ)
ವಿಶೇಷಾಧಿಕಾರಿ ಮತ್ತು ಪದನಿಮಿತ್ತ,
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ
(ಲೋಕೋಪಯೋಗಿ ಆರ್ಥಿಕ ಕೋಶ)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಲೆಕ್ಕ ಪತ್ರ ಮತ್ತು ಹಕ್ಕುದಾರಿಕೆ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಬೆಂಗಳೂರು.
6. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ ವಿಧಾನ ಪರಿಷತ್ತು, ವಿಧಾನ ಸೌಧ ಬೆಂಗಳೂರು.

5/...

7. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
9. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
10. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
11. ಎಲ್ಲಾ ಜಿಲ್ಲೆಗಳ ಜಿಲ್ಲಾಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
12. ಎಲ್ಲಾ ವಿಶ್ವ ವಿದ್ಯಾಲಯಗಳ ರಿಜಿಸ್ಟ್ರಾರ್‌ಗಳು.
13. ಎಲ್ಲಾ ಇಲಾಖೆಗಳ ಇಲಾಖಾ ಮುಖ್ಯಸ್ಥರುಗಳು.
14. ಎಲ್ಲಾ ನಿಗಮಗಳ/ ಮಂಡಳಿಗಳ/ ಪ್ರಾಧಿಕಾರಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ವ್ಯವಸ್ಥಾಪಕ ನಿರ್ದೇಶಕರುಗಳು.
15. ಎಲ್ಲಾ ಇಲಾಖೆಗಳ ಆಂತರಿಕ ಆರ್ಥಿಕ ಸಲಹೆಗಾರರು.
16. ಆರ್ಥಿಕ ಇಲಾಖೆಯ ಎಲ್ಲಾ ಸರ್ಕಾರದ ಜಂಟಿ ಕಾರ್ಯದರ್ಶಿಗಳು/ಸರ್ಕಾರದ ಉಪ ಕಾರ್ಯದರ್ಶಿಗಳು/ವಿಶೇಷಾಧಿಕಾರಿಗಳು/ ಸರ್ಕಾರದ ಅಧೀನ ಕಾರ್ಯದರ್ಶಿಗಳು.
17. ಕಛೇರಿ ಪ್ರತಿ.